# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST


ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.01 | Issue. 279 | Pages. 2 | Date: 25-09-2025, THURSDAY | RNI NO: KARKAN/2024/89601 | Kannada Daily

ಸಂಪುಟ : 01 - ಸಂಚಿಕೆ : 279 - ಪುಟಗಳು : 2 | 25-09-2025 ಗುರುವಾರ | Ph: 8762954248 | ದರ : ₹1

# ಸಂತೆಶಿವರದ ಸರಸ್ವತಿ ಪುತ್ರ

# ಎಸ್.ಎಲ್.ಭೈರಪ್ಪ ಅಸ್ತಂಗತ

ಮೈಸೂರು: ಸರಸ್ವತಿ ಸಮ್ಮಾನ್ ಪ್ರಶಸ್ತಿ ಪುರಸ್ಕೃತ, ಕಾದಂಬರಿಕಾರ ಪ್ರೊ.ಎಸ್.ಎಲ್.ಭೈರಪ್ಪ (94) ಅವರು ಬೆಂಗಳೂರಿನ ರಾಜರಾಜೇಶ್ವರಿನಗರದ ರಾಷ್ಟ್ರೋತ್ಥಾನ ಆಸ್ಪತ್ರೆಯಲ್ಲಿ ಬುಧವಾರ ಮಧ್ಯಾಹ್ನ 2.38ಕ್ಕೆ ಹೃದಯಾಘಾತದಿಂದ ನಿಧನರಾದರು.

ಕುವೆಂಪುನಗರದ ಉದಯರವಿ ರಸ್ತೆಯಲ್ಲಿರುವ ನಿವಾಸದಲ್ಲಿದ್ದ ಅವರನ್ನು 6 ತಿಂಗಳ ಹಿಂದೆ ಅನಾರೋಗ್ಯ ಕಾರಣ ಬೆಂಗಳೂರಿನ ಆಸ್ಪತ್ರೆಗೆ ಚಿಕಿತ್ಸೆ ಗಾಗಿ ದಾಖಲಿಸಲಾಗಿತ್ತು. ಅವರಿಗೆ ಪತ್ನಿ ಸರಸ್ವತಿ, ಪುತ್ರರಾದ ರವಿಶಂಕರ್ ಹಾಗೂ ಉದಯಶಂಕರ್ ಇದ್ದಾರೆ.

ಹಾಸನ ಜಿಲ್ಲೆ ಚನ್ನರಾಯಪಟ್ಟಣ ತಾಲ್ಲೂಕಿನ ಸಂತೇಶಿವರ ಗ್ರಾಮದಲ್ಲಿ 1934 ಆಗಸ್ಟ್ 20ರಂದು ಲಿಂಗಣ್ಣಯ್ಯ - ಗೌರಮ್ಮ ದಂಪತಿಯ ಪುತ್ರರಾಗಿ ಜನಿಸಿದ ಅವರು, ಬಾಗೂರು, ನುಗ್ಗೇಹಳ್ಳಿ ಶಾಲೆಗಳಲ್ಲಿ ಪ್ರಾಥಮಿಕ, ಮೈಸೂರಿನ ಶಾರದಾವಿಲಾಸದಲ್ಲಿ ಪ್ರೌಢಶಾಲಾ ಶಿಕ್ಷಣ ಪಡೆದರು. ಮಹಾರಾಜ ಕಾಲೇಜಿನಲ್ಲಿ ಬಿ.ಎ ಹಾಗೂ ಮೈಸೂರು ವಿಶ್ವವಿದ್ಯಾಲಯದಲ್ಲಿ 2 ಚಿನ್ನದ ಪದಕಗಳೊಂದಿಗೆ ಎಂ.ಎ ತತ್ವಶಾಸ್ತ್ರದಲ್ಲಿ ಪದವಿ ಪಡೆದಿದ್ದರು.

ಬರೋಡದ ಸಯ್ಯಾಜಿರಾವ್ ವಿಶ್ವವಿದ್ಯಾಲಯದಲ್ಲಿ ಟಸತ್ಯ ಮತ್ತು ಸೌಂದರ್ಯ ಪ್ರಬಂಧಕ್ಕೆ ಪಿ.ಎಚ್‌ಡಿ ಪದವಿ ಪಡೆದ ನಂತರ ಅವರು, ಹುಬ್ಬಳ್ಳಿಯ ಕಾಡಸಿದ್ದೇಶ್ವರ ಕಾಲೇಜು, ಗುಜರಾತ್‌ನ ಸರ್ದಾರ್ ವಲ್ಲಭಬಾಯಿ ಪಟೇಲ್ ವಿಶ್ವವಿದ್ಯಾಲಯದಲ್ಲಿ ತತ್ವಶಾಸ್ತ್ರದ ಪ್ರಾಧ್ಯಾಪಕರಾಗಿದ್ದರು.

## ಕಾದಂಬರಿಗಳಲ್ಲಿ ತವರೂರ ಚಿತ್ರಣ...

ಕಾದಂಬರಿಗಳಲ್ಲಿ ಯಾವುದಾದರೂ ಒಂದು ಹಳ್ಳಿಯ ಚಿತ್ರಣ ಕೊಡಬೇಕು. ಹಳ್ಳಿ ಭಾಷೆ ಬಳಸಬೇಕು ಎಂದರೆ ನಾನು ಹುಟ್ಟಿದ ಹಾಸನ ಜಿಲ್ಲೆಯ ಹಳ್ಳಿ, ಭಾಷೆ ಚಿತ್ರಣ ಕೊಟ್ಟಿದ್ದೇನೆ. ನನಗೆ ಪಕ್ಕದ ಜಿಲ್ಲೆಯ ಹಳ್ಳಿ, ಭಾಷೆಯ ಚಿತ್ರಣ ಗೊತ್ತಿಲ್ಲ. 2022 ರಲ್ಲಿ ನಗರದಲ್ಲಿ ಆಯೋಜಿಸಿದ್ದ ಹೊಯ್ಸಳ ಸಾಹಿತ್ಯೋತ್ಸವದಲ್ಲಿ ಆಡಿದ ಪ್ರೊ. ಎಸ್.ಎಲ್. ಭೈರಪ್ಪನವರ ಈ ಮಾತುಗಳು, ತವರೂರಿನ ಅಭಿಮಾನ ಎತ್ತಿ ತೋರಿಸಿದ್ದವು.

ಒಂದು ಕಡೆ (ಸೀಮೆ)ಯಿಂದ ಇನ್ನೊಂದು ಕಡೆಗೆ ಹೋದರೆ ಭಾಷೆಯ ಛಾಯೆ ಬದಲಾಗಲಿದೆ. ಭಾಷಾ ತಜ್ಞರ ಪ್ರಕಾರ, 16 ಮೈಲಿಯವರೆಗೆ ಒಂದು ಭಾಷೆ ಇದ್ದರೆ, ನಂತರ ಅದರ ಛಾಯೆ ಬದಲಾಯಿಸುತ್ತದೆ. ಆದರೆ ಈಗ ಸೀಮೆಯ ಅಂತರ, ಭಾಷೆ ಒಂದಾಗಿದೆ ಎಂದಿದ್ದರು.

ನನ್ನ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣವನ್ನು ಹುಟ್ಟೂರು ಸಂತೇಶಿವರ, ನುಗ್ಗೇಹಳ್ಳಿ, ಬಾಗೂರು ಹಾಗೂ ಗೊರೂರಿನಲ್ಲಿ ಪೂರ್ಣಗೊಳಿಸಿದೆ. ನಾನು ಸಾಹಿತ್ಯ ಕ್ಷೇತ್ರದಲ್ಲಿ ಎಷ್ಟೇ ಸಾಧನೆ ಮಾಡಿದ್ದರೂ ಹುಟ್ಟೂರು ಎಂಬ ಅಭಿಮಾನ ನನ್ನನ್ನು ಬಿಡಲಿಲ್ಲ. ಇಂದಿಗೂ ನನ್ನನ್ನು ಸಂತೇಶಿವರದ ಎಸ್.ಎಲ್.ಭೈರಪ್ಪ ಎಂದೇ ಕರೆಯುತ್ತಾರೆಟಿ ಎಂದು ಹೆಮ್ಮೆಯಿಂದ ಹೇಳಿದ್ದರು.

## ಹಿರಿಯ ಸಾಹಿತಿ ಎಸ್.ಎಲ್. ಭೈರಪ್ಪ ಅವರ ನಿಧನಕ್ಕೆ ಪ್ರಧಾನಿ, ಸಿಎಂ ಸೇರಿದಂತೆ ನಾಯಕರಿಂದ ತೀವ್ರ ಸಂತಾಪ

ಬೆಂಗಳೂರು: ಎಸ್.ಎಲ್. ಭೈರಪ್ಪ ಅವರ ಅಗಲಿಕೆಯು ಕನ್ನಡ ಸಾಹಿತ್ಯಕ್ಕೆ ತುಂಬಲಾರದ ನಷ್ಟವಾಗಿದ್ದು, ರಾಷ್ಟ್ರೀಯ ಮತ್ತು ರಾಜ್ಯದ ಗಣ್ಯರು ತೀವ್ರ ದುಃಖವನ್ನು ವ್ಯಕ್ತಪಡಿಸಿದ್ದಾರೆ.

### ಧೀಮಂತ ವ್ಯಕ್ತಿಯನ್ನು ಕಳೆದುಕೊಂಡಿದ್ದೇವೆ : ಪ್ರಧಾನಿ ಮೋದಿ



ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಎಕ್ಸ್ ನಲ್ಲಿ (ಟ್ವಿಟರ್) ಪೋಸ್ಟ್ ಮಾಡಿ, ಶ್ರೀ ಎಸ್.ಎಲ್. ಭೈರಪ್ಪ ಅವರ ಅಗಲಿಕೆಯಿಂದ ನಾವು ಭಾರತದ ಆತ್ಮವನ್ನು ಆಳವಾಗಿ ಅಧ್ಯಯನ ಮಾಡಿದ ಧೀಮಂತ ವ್ಯಕ್ತಿಯನ್ನು ಕಳೆದುಕೊಂಡಿದ್ದೇವೆ. ಭಯರಹಿತ ಮತ್ತು ಕಾಲಾತೀತ ಚಿಂತಕರಾಗಿ, ಅವರು ಕನ್ನಡ ಸಾಹಿತ್ಯವನ್ನು ಆಳವಾದ ಚಿಂತನೆಯ ಕೃತಿಗಳ ಮೂಲಕ ಸಮೃದ್ಧಗೊಳಿಸಿದ್ದಾರೆ. ಅವರ ಬರಹಗಳು ತಲೆಮಾರುಗಳನ್ನು ಸಮಾಜದೊಂದಿಗೆ ಆಳವಾಗಿ ತೊಡಗಿಸಿಕೊಳ್ಳಲು ಪ್ರೇರೇಪಿಸಿದವು. ನಮ್ಮ ಇತಿಹಾಸ ಮತ್ತು ಸಂಸ್ಕೃತಿಯ ಬಗ್ಗೆ ಅವರ ಅಚಂಚಲ ಪ್ರೀತಿ ಮುಂದಿನ ದಿನಗಳಲ್ಲಿ ಜನರನ್ನು ಪ್ರೇರೇಪಿಸುತ್ತದೆ. ಅವರ ಕುಟುಂಬ ಮತ್ತು ಅಭಿಮಾನಿಗಳಿಗೆ ನನ್ನ ಸಂತಾಪ. ಓಂ ಶಾಂತಿ ಎಂದು ಸಂತಾಪ ಸೂಚಿಸಿದ್ದಾರೆ.

### ಕನ್ನಡ ಸಾಹಿತ್ಯದಲ್ಲಿ ಅವರು ಗಗನಚುಂಬಿ ವ್ಯಕ್ತಿ: ರಾಷ್ಟ್ರಪತಿ ಮುರ್ಮು




ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಸಹ ಎಕ್ಸ್ ನಲ್ಲಿ, ಡಾ. ಎಸ್.ಎಲ್. ಭೈರಪ್ಪ ಅವರ ನಿಧನದಿಂದ ಆಳವಾದ ದುಃಖವಾಯಿತು. ಕನ್ನಡ ಸಾಹಿತ್ಯದಲ್ಲಿ ಅವರು ಗಗನಚುಂಬಿ ವ್ಯಕ್ತಿಯಾಗಿದ್ದರು. ಸಾಹಿತ್ಯ, ತತ್ವಶಾಸ್ತ್ರ, ಸಂಸ್ಕೃತಿ ಮತ್ತು ಬೌದ್ಧಿಕ ಚಿಂತನೆಯ ಕ್ಷೇತ್ರಗಳಲ್ಲಿ ಅವರ ಅದ್ಭುತ ಕೊಡುಗೆಗಳು ಕನ್ನಡ ಸಾಹಿತ್ಯವನ್ನು ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಮಟ್ಟಕ್ಕೆ ಹೊರೆದಿವೆ. ಅವರ ಪರಂಪರೆ ಮುಂದಿನ ತಲೆಮಾರುಗಳನ್ನು ಪ್ರೇರೇಪಿಸುತ್ತದೆ. ಅವರ ಕುಟುಂಬ, ಅಭಿಮಾನಿಗಳು ಮತ್ತು ಅನೇಕ ಓದುಗರಿಗೆ ನನ್ನ ಹೃದಯಪೂರ್ವಕ ಸಂತಾಪಗಳು ಎಂದು ಹೇಳಿದ್ದಾರೆ.

### ಈ ನಷ್ಟ ಸಾಹಿತ್ಯ ಲೋಕವನ್ನು ಬಡವಾಗಿಸಿದೆ : ಸಿ.ಎಂ. ಸಿದ್ಧರಾಮಯ್ಯ




ಕನ್ನಡ ಸಾಹಿತ್ಯ ಲೋಕದ ಹಿರಿಯ ಲೇಖಕ ಎಸ್.ಎಲ್. ಭೈರಪ್ಪ ಅವರ ಅಗಲಿಕೆಯ ಸುದ್ದಿ ದುಃಖ ತಂದಿದೆ. ಅವರ ಆತ್ಮೀಯ ಬರಹಶೈಲಿಯಿಂದಾಗಿ ಅವರಿಗೆ ವಿಶಾಲ ಓದುಗ ಸಮುದಾಯವಿತ್ತು. ಈ ನಷ್ಟ ಸಾಹಿತ್ಯ ಲೋಕವನ್ನು ಬಡವಾಗಿಸಿದೆ. ಭೈರಪ್ಪ ಅವರ ಆತ್ಮಕ್ಕೆ ಶಾಂತಿ ಸಿಗಲಿ. ಅವರ ಕುಟುಂಬ ಮತ್ತು ಓದುಗರ ಸಮುದಾಯಕ್ಕೆ ನನ್ನ ಸಂತಾಪಗಳು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಟ್ವೀಟ್ ಮಾಡಿದ್ದಾರೆ.

### ಕನ್ನಡ ಸಾಹಿತ್ಯವನ್ನು ಸಮೃದ್ಧಗೊಳಿಸಿದ್ದರು : ಅಮಿತ್ ಶಾ



ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು, ಪ್ರಸಿದ್ಧ ಕನ್ನಡ ಕಾದಂಬರಿಕಾರ ಎಸ್. ಎಲ್. ಭೈರಪ್ಪ ಅವರ ನಿಧನದ ಸುದ್ದಿ ಅತ್ಯಂತ ದುಃಖ ತಂದಿದೆ. ಆರು ದಶಕಗಳ ಕಾಲ ಭೈರಪ್ಪನವರು ಭಾರತೀಯ ದಾರ್ಶನಿಕ ಪರಂಪರೆಯ ಜ್ಞಾನ ಮತ್ತು ಸಾಮಾಜಿಕ ವಿಚಾರಗಳ ಆಳವಾದ ಒಳನೋಟಗಳಿಂದ ನಮ್ಮ ಸಾಹಿತ್ಯವನ್ನು ಸಮೃದ್ಧಗೊಳಿಸಿದ್ದರು. 2023ರಲ್ಲಿ ನರೇಂದ್ರ ಮೋದಿ ಸರ್ಕಾರವು ಅವರಿಗೆ ಪದ್ಮಭೂಷಣ ಪ್ರಶಸ್ತಿಯನ್ನು ನೀಡಿ ಗೌರವಿಸಿತ್ತು. ಅವರ ಅಗಲಿಕೆ ಸಮಾಜಕ್ಕೆ ತುಂಬಲಾರದ ನಷ್ಟ. ಈ ದುಃಖದ ಸಂದರ್ಭದಲ್ಲಿ ಅವರ ಕುಟುಂಬದವರು ಹಾಗೂ ಅಭಿಮಾನಿಗಳಿಗೆ ನನ್ನ ಸಂತಾಪಗಳು ಎಂದು ಸಂತಾಪ ವ್ಯಕ್ತಪಡಿಸಿದ್ದಾರೆ.

### ಸಾಹಿತ್ಯ ಧ್ವನಿಯನ್ನು ನೀಡಿದ್ದಾರೆ : ಕಮಲ್ ಹಾಸನ್ ಸಂತಾಪ



ಅಭಿನಯ ಸಾಹಿತ್ಯಕ್ಕೆ ತಮ್ಮ ಕೊಡುಗೆಯನ್ನು ನೆನಪಿಸಿರುವ ನಟ ಕಮಲ್ ಹಾಸನ್ ಅವರು, ನಾವು ಆಧುನಿಕ ಕಥೆಗಳ ದೇವರ ಶ್ರೀ ಎಸ್.ಎಲ್. ಭೈರಪ್ಪ ಅವರನ್ನು ಅವರು ನಮ್ಮೊಂದುವೆ ಇದ್ದಾಗಲೇ ಆಚರಿಸಿದ್ದೇವೆ. ಕನ್ನಡಿಗರು ನಮಗೆ ನಮ್ಮ ಕಾಲದ ಅತ್ಯಂತ ದೊಡ್ಡ ಸಾಹಿತ್ಯ ಧ್ವನಿಯನ್ನು ನೀಡಿದ್ದಾರೆ. ಅವರ ಅಮರ ಕೃತಿಗಳು ಇನ್ನು ಮುಂದೆ ಮಹಾಭಾರತ ಮತ್ತು ರಾಮಾಯಣದಂತಹ ಪುರಾಣಗಳನ್ನು ಓದುವುದನ್ನು ಕಲಿಸುತ್ತವೆ. ಅವರ ಕುಟುಂಬ ಮತ್ತು ಅಭಿಮಾನಿಗಳಿಗೆ ನನ್ನ ಆಳವಾದ ಸಂತಾಪಗಳು ಎಂದು ಹೇಳಿದ್ದಾರೆ.

### ಮುಂದಿನ ತಲೆಮಾರುಗಳಿಗೆ ಸದಾ ಪ್ರೇರಣೆ : ಉದಯ್ ಗರುಡಾಚಾರ್



ಚಿಕ್ಕಪೇಟೆ ಶಾಸಕ ಉದಯ್ ಬಿ. ಗರುಡಚಾರ್ ಅವರು, ಪ್ರಸಿದ್ಧ ಕನ್ನಡ ಸಾಹಿತಿ, ಸರಸ್ವತಿ ಸಮ್ಮಾನ್ ಮತ್ತು ಪದ್ಮಭೂಷಣ ಪುರಸ್ಕೃತ ಡಾ. ಎಸ್.ಎಲ್. ಭೈರಪ್ಪ ಅವರ ನಿಧನವು ಆಳವಾದ ದುಃಖವನ್ನುಂಟುಮಾಡಿದೆ.

ಅವರ ಸಾಹಿತ್ಯ ಕೃತಿಗಳು ಕನ್ನಡ ಸಾಹಿತ್ಯವನ್ನು ಸಮೃದ್ಧಗೊಳಿಸಿದ್ದು, ಮುಂದಿನ ತಲೆಮಾರುಗಳಿಗೆ ಸದಾ ಪ್ರೇರಣೆಯಾಗಿ ಉಳಿಯುತ್ತವೆ. ಭಾವಪೂರ್ವಕ ಸಂತಾಪಗಳು. ಓಂ ಶಾಂತಿಃ ಎಂದು ಹೇಳಿದ್ದಾರೆ.

# ಹುಟ್ಟೂರಿನ ಕೆರೆ ತುಂಬಿಸಿದ್ದ ಭಗೀರಥ

## ಬರದ ನಾಡಿಗೆ ನೀರು ತಂದವರಿಗೆ ಹುಟ್ಟೂರ ಅಭಿಮಾನ

ಹಾಸನ: ಈ ಭಾಗದ ರೈತರ ದಶಕದ ಕನಸು ಈಡೇರಿದೆ. ನಾನು ನನ್ನ ಹುಟ್ಟೂರಿನ ಜನರಿಗೆ ಶಾಶ್ವತ ಯೋಜನೆ ಮಾಡಬೇಕೆನ್ನುವ ಉದ್ದೇಶದಿಂದ ಈ ಯೋಜನೆ ಅನುಷ್ಠಾನ ಮಾಡಲಾಗಿದೆ. ಈ ಹಂಗಾಮಿನಿಂದಲೇ ಗ್ರಾಮದ ಕೆರೆಗೆ ಈ ಯೋಜನೆಯ ಮೂಲಕ ನೀರು ಬರುತ್ತಿದೆ. ಸಹಕಾರ ನೀಡಿದ ಎಲ್ಲರಿಗೂ ಧನ್ಯವಾದ

ಕಾದಂಬರಿಕಾರ ಪ್ರೊ.ಎಸ್.ಎಲ್. ಭೈರಪ್ಪನವರು ತಮ್ಮ ಸ್ವಗ್ರಾಮವಾದ ಚನ್ನರಾಯಪಟ್ಟಣ ತಾಲ್ಲೂಕಿನ ಸಂತೇಶಿವರದಲ್ಲಿ ಆಡಿದ್ದ ಮಾತುಗಳಿವು. ಸಾಹಿತ್ಯದಲ್ಲಿ ತಮ್ಮದೇ ಆದ ಛಾಪು ಮೂಡಿಸಿದ್ದ ಪ್ರೊ.ಎಸ್.ಎಲ್.ಭೈರಪ್ಪ, ತಮ್ಮ ಹುಟ್ಟೂರು ಸಂತೇಶಿವರದ ಬಗ್ಗೆ ಹೊಂದಿದ್ದ ಅಭಿಮಾನವನ್ನು ಇಂದಿಗೂ ಜನರು ಸ್ಮರಿಸುತ್ತಿದ್ದಾರೆ. ರೈತಾಪಿ ಜನರ ಅನುಕೂಲಕ್ಕಾಗಿ ಹಟ ಹಿಡಿದು ಹುಟ್ಟೂರಿನ ಕೆರೆ ತುಂಬಿಸಿದ ಭಗೀರಥ ಎನ್ನುವ ಬಿರುದನ್ನೂ ಅವರು ಪಡೆದಿದ್ದಾರೆ.



ದಶಕಗಳ ಕಾಲ ಈ ಭಾಗದ ಕೆರೆಗಳು ತುಂಬದೇ ರೈತರು ಸಂಕಷ್ಟದಲ್ಲಿದ್ದರು. ಇದನ್ನು ಮನಗಂಡ ಸಾಹಿತಿ ಪ್ರೊ.ಭೈರಪ್ಪ, ಏತ ನೀರಾವರಿ ಅನುಷ್ಠಾನಕ್ಕೆ ಅನುದಾನ ತರುವ ಪ್ರಯತ್ನ ಆರಂಭಿಸಿದರು. ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ಮುಖ್ಯಮಂತ್ರಿಯಾಗಿದ್ದ ಬಿ.ಎಸ್. ಯಡಿಯೂರಪ್ಪ ಅವರಿಗೆ ಮನವಿ ಮಾಡಿದ್ದ ಪ್ರೊ.ಭೈರಪ್ಪ, ಯೋಜನೆಗೆ 25 ಕೋಟಿ ಬಿಡುಗಡೆ ಮಾಡಿಸುವಲ್ಲಿ ಹೆಚ್ಚು ಪರಿಶ್ರಮ ಪಟ್ಟಿದ್ದರು.

ನಂತರ ಮುಖ್ಯಮಂತ್ರಿಯಾದ ಬಸವರಾಜ್ ಬೊಮ್ಮಾಯಿ ಸಹಕಾರದಿಂದ ಯೋಜನೆಗೆ ಅನುಮೋದನೆ ದೊರೆಯಿತು. ಇಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಹಣ ಬಿಡುಗಡೆ ಮಾಡುವ ಮೂಲಕ ಯೋಜನೆ ಅನುಷ್ಠಾನಗೊಂಡಿದೆ. ಈ ಹಂಗಾಮಿನಲ್ಲಿ ಸಂತೇಶಿವರ ಹಾಗೂ ಅಗ್ರಹಾರ ಬೆಳಗುಲಿ ಕೆರೆಗಳಿಗೆ ನೀರು ಹರಿಸಲಾಗಿದೆ.

ಹೇಮಾವತಿ ಮುಖ್ಯನಾಲೆಯ ಕಾರೇಹಳ್ಳಿ ಬಳಿಯ ಜಾಬ್‌ಘಟ್ಟ ಗ್ರಾಮದ ನಾಗಮಂಗಲ ಉಪ ನಾಲೆಯಿಂದ ಸುಮಾರು 11 ಕಿ.ಮೀ. ಪೈಪ್‌ಲೈನ್ ಮಾಡಲಾಗಿದೆ. ಅಲ್ಲಿಂದ ನೀರು ತರುವ ಮೂಲಕ ರಾಂಪುರ ಗೇಟ್ ಬಳಿ ಇರುವ ವಿತರಣಾ ತೊಟ್ಟಿಯಿಂದ ಸಂತೇಶಿವರ ಹಾಗೂ ಅಗ್ರಹಾರ ಬೆಳಗುಲಿ ಗ್ರಾಮದ ಕೆರೆಗಳಿಗೆ ನೀರು ಹರಿಸಲಾಗಿದೆ. ಯೋಜನೆಯಿಂದ 20ಕ್ಕೂ ಹೆಚ್ಚು ಗ್ರಾಮಗಳಿಗೆ ಅನುಕೂಲವಾಗುತ್ತಿದೆ.

ಯೋಜನೆಗೆ ಕಾರೇಹಳ್ಳಿ ಸಮೀಪ ಪೈಪ್‌ಲೈನ್ ಕಾಮಗಾರಿ ನಡೆಸಲು ಕೆಲವರು ವಿರೋಧ ವ್ಯಕ್ತಪಡಿಸಿದ್ದರು. ಆದರೆ ಭೈರಪ್ಪನವರೇ ಸ್ವತಃ ರೈತರನ್ನು ಭೇಟಿಯಾಗಿ ಮನವಿ ಮಾಡುವ ಮೂಲಕ ಯೋಜನೆ ಸಾಕಾರಗೊಳ್ಳುವಲ್ಲಿ ಪ್ರಮುಖ ಪಾತ್ರ ವಹಿಸಿದರು.

ಸಂತೇಶಿವರದಲ್ಲಿ ಆಯೋಜಿಸಿದ್ದ ಕಾರ್ಯಕ್ರಮಕ್ಕೆ ಬಂದಿದ್ದ ಪ್ರೊ.ಭೈರಪ್ಪ, ತಮ್ಮ ಕುಟುಂಬದ ಸದಸ್ಯರೊಂದಿಗೆ ಕೆರೆ ವೀಕ್ಷಿಸಿ ಸಂತಸಪಟ್ಟಿದ್ದರು.



## ಪ್ರಶಸ್ತಿ, ಸನ್ಮಾನ ಮತ್ತು ಗೌರವಗಳು

ಎಸ್.ಎಲ್.ಭೈರಪ್ಪ ಅವರ ಸಾಹಿತ್ಯಿಕ ಯೋಗದಾನವನ್ನು ರಾಷ್ಟ್ರೀಯ ಮತ್ತು ರಾಜ್ಯಮಟ್ಟದಲ್ಲಿ ಅಸಂಖ್ಯಾತ ಗೌರವಗಳಿಂದ ಸನ್ಮಾನಿಸಲಾಗಿದೆ.

- ರಾಜ್ಯೋತ್ಸವ ಪ್ರಶಸ್ತಿ (1983)
- ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ (1991) - ವಂಶವೃಕ್ಷ ಕೃತಿಗಾಗಿ
- ಪಂಪ ಪ್ರಶಸ್ತಿ (1993)
- ಸರ್ಮೋಚ್ಚ ಕನ್ನಡ ಸನ್ಮಾನ - ಟನಾಡೋಜಟ ಪ್ರಶಸ್ತಿ (2008)
- ಭಾರತ ಸರ್ಕಾರದ ಪದ್ಮಶ್ರೀ ಪ್ರಶಸ್ತಿ (2008)
- ರಾಷ್ಟ್ರಕವಿ ಗೋವಿಂದ ಪೈ ಸಮಗ್ರ ಸಾಧನೆ ಪ್ರಶಸ್ತಿ (2015)
- ಕರ್ನಾಟಕ ರತ್ನ ಪ್ರಶಸ್ತಿ (2015) - ಇದು ಕರ್ನಾಟಕದ ಅತ್ಯುನ್ನತ ನಾಗರಿಕ ಪ್ರಶಸ್ತಿ.

## ಭಾಷಾಂತರ, ಸಿನಿಮಾ ಆಗಿಯೂ ಜನಪ್ರಿಯವಾದವು ಭೈರಪ್ಪ ಕಾದಂಬರಿಗಳು

ಕನ್ನಡದ ಮೇರು ಸಾಹಿತಿ, ಕವಿ ಹಾಗೂ ಕಾದಂಬರಿಕಾರ ಭೈರಪ್ಪ ಅವರು ಇಹಲೋಕ ತ್ಯಜಿಸಿದ್ದರೂ ಅವರು ರಚಿಸಿದ ಕೃತಿಗಳು, ಕಾದಂಬರಿಗಳಲ್ಲಿ ಅಚ್ಚಳಿಯದೇ ಉಳಿದಿದ್ದಾರೆ. ಇವರ ಕೃತಿ ಹಾಗೂ. ಕಾದಂಬರಿಗಳು ಬರೀ ಕನ್ನಡದಲ್ಲಷ್ಟೇ ಅಲ್ಲ ಇತರ ಹಲವು ಭಾಷೆಗಳಲ್ಲಿ ಭಾಷಾಂತರಗೊಂಡಿವೆ.

## ಇತರ ಭಾಷೆಗಳಿಗೆ ಅನುವಾದಗೊಂಡ ಕೃತಿಗಳು

ಹೌದು,ಆಯಾ ಕಾಲದಲ್ಲಿ ಬಂದ ಅವರ ಕಾದಂಬರಿಗಳೆಲ್ಲಾ ಚರ್ಚೆಗೆ ಒಳಗಾಗಿವೆ. ಇಂಗ್ಲಿಷ್ ಭಾಷೆಯೂ ಸೇರಿದಂತೆ ಭಾರತೀಯ ಹಲವು ಭಾಷೆಗಳಿಗೆ ಭೈರಪ್ಪನವರ ಕಾದಂಬರಿಗಳು ಅನುವಾದ ಗೊಂಡಿವೆ. ಗೃಹಭಂಗ,ವಂಶವೃಕ್ಷ, ನೆಲೆ, ಸಾಕ್ಷಿ, ನಾಯಿ ನೆರಳು, ತಬ್ಬಲಿಯು ನೀನಾದೆ ಮಗನೆ, ದಾಟು, ಧರ್ಮಶ್ರೀ, ಪರ್ವ, ಭಿತ್ತಿ ಮುಂತಾದವು ಹಿಂದಿ, ಮರಾಠಿಯಲ್ಲಿ ಜನಪ್ರಿಯವಾಗಿವೆ.

## ಎಸ್.ಎಲ್. ಭೈರಪ್ಪ ಅಂದರೆ ಇಷ್ಟೆಲ್ಲ..

ಬರೋಡದ ಸಯ್ಯಾಜಿರಾವ್ ವಿಶ್ವವಿದ್ಯಾಲಯದಲ್ಲಿ ಸತ್ಯ ಮತ್ತು ಸೌಂದರ್ಯ ಪ್ರಬಂಧಕ್ಕೆ ಪಿ.ಎಚ್‌ಡಿ ಪದವಿ ಪಡೆದ ನಂತರ ಅವರು, ಹುಬ್ಬಳ್ಳಿಯ ಕಾಡಸಿದ್ದೇಶ್ವರ ಕಾಲೇಜು, ಗುಜರಾತ್‌ನ ಸರ್ದಾರ್ ವಲ್ಲಭಬಾಯಿ ಪಟೇಲ್ ವಿಶ್ವವಿದ್ಯಾಲಯದಲ್ಲಿ ತತ್ವಶಾಸ್ತ್ರದ ಪ್ರಾಧ್ಯಾಪಕರಾಗಿದ್ದರು.

ದೆಹಲಿಯ ರಾಷ್ಟ್ರೀಯ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯಲ್ಲಿ (ಎನ್‌ಸಿಇಆರ್‌ಟಿ) 1967-71ರವರೆಗೆ ಉಪನ್ಯಾಸಕರಾಗಿ ಸೇವೆ ಸಲ್ಲಿಸಿ, ಮೈಸೂರಿಗೆ ಪ್ರಾದೇಶಿಕ ಶಿಕ್ಷಣ ಕಾಲೇಜಿಗೆ ವರ್ಗವಾದ ಅವರು, ತತ್ವಶಾಸ್ತ್ರ ಮತ್ತು ಶಿಕ್ಷಣ ವಿಜ್ಞಾನದ ಪ್ರಾಧ್ಯಾಪಕರಾಗಿ 1991ರಲ್ಲಿ ನಿವೃತ್ತರಾದರು.

ವಿದ್ಯಾರ್ಥಿಯಾಗಿದ್ದಾಗಲೇ ಭೀಮಕಾಯ, ಬೆಳಕು ಮೂಡಿತು ಕಾದಂಬರಿಗಳನ್ನು ಬರೆದಿದ್ದ ಅವರ ಮೊದಲ ಕಾದಂಬರಿ ಧರ್ಮಶ್ರೀ 1961ರಲ್ಲಿ ಪ್ರಕಟಗೊಂಡಿತ್ತು. ದೂರ ಸರಿದರು (1962), ಮತದಾನ, ವಂಶವೃಕ್ಷ (1965), ಜಲಪಾತ (1967), ನಾಯಿನೆರಳು (1968), ತಬ್ಬಲಿಯು ನೀನಾದೆ ಮಗನೆ (1970), ಗೃಹಭಂಗ (1970). ನಿರಾಕರಣ (1971), ಗ್ರಹಣ(1972), ದಾಟು(1973), ಅನ್ವೇಷಣ(1976), ಪರ್ವ (1979), ನೆಲೆ (1983), ಸಾಕ್ಷಿ (1986), ಅಂಚು (1990), ತಂತು (1993), ಸಾರ್ಥ (1998), ಮಂದ್ರ(2002), ಆವರಣ (2007),ಕವಲು (2010), ಯಾನ (2014), ಉತ್ತರಕಾಂಡ (2017) ಅವರ ಕಾದಂಬರಿಗಳು. (1979), 2 (1983), 8 (2007), ಭಿತ್ತಿ (1996) ಅವರ ಆತ್ಮಕಥನ, ಸಾಹಿತ್ಯ ಮತ್ತು ಪ್ರತೀಕ (1966), ಸತ್ಯಮತ್ತು ಸೌಂದರ್ಯ (1967), ಕಥೆ ಮತ್ತು ಕಥಾವಸ್ತು (1969) ಅವತ ಸಾಹಿತ್ಯ ಮೀಮಾಂಸೆ ಮತ್ತು ಚಿಂತನಾ ಕೃತಿಗಳಾಗಿವೆ. ಹಿಂದೂಸ್ತಾನಿ ಸಂಗೀತದ ಬಗ್ಗೆ ವಿಶೇಷ ಆಸಕ್ತಿ ಹೊಂದಿದ್ದ ಅವರು ಗಂಗೂಬಾಯಿ ಹಾನಗಲ್ ಕೃತಿಯ ಸಂಪಾದಕರೂ ಆಗಿದ್ದರು.

ವಂಶವೃಕ್ಷ ಕಾದಂಬರಿಗೆ 1966ರಲ್ಲಿ ರಾಜ್ಯ ಸಾಹಿತ್ಯ ಅಕಾಡೆಮಿ, ದಾಟು ಕಾದಂಬರಿಗೆ 1975ರಲ್ಲಿ ಕೇಂದ್ರ ಸಾಹಿತ್ಯ ಅಕಾಡೆಮಿ, 1985ರಲ್ಲಿ ಮಾಸ್ತಿ, 2005ರಲ್ಲಿ ಪಂಪ ಪ್ರಶಸ್ತಿ, 2010ರಲ್ಲಿ ಸರಸ್ವತಿ ಸಮ್ಮಾನ್, 2011ರಲ್ಲಿ ನಾಡೋಜ, 2014ರಲ್ಲಿ ಬೆಟಗೇರಿ ಕೃಷ್ಣಶರ್ಮ ಪ್ರಶಸ್ತಿ, 2017ರಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ನೃಪತುಂಗ ಪ್ರಶಸ್ತಿ ದೊರೆತಿದೆ.

2014ರಲ್ಲಿ ನ್ಯಾಷನಲ್ ರೀಸರ್ಚ್ ಪ್ರೊಫೆಸರ್, 2015ರಲ್ಲಿ ಸಾಹಿತ್ಯ ಅಕಾಡೆಮಿ ಫೆಲೋಶಿಪ್ ಗೌರವಕ್ಕೆ ಭಾಜನರಾಗಿದ್ದ ಅವರಿಗೆ ಕೇಂದ್ರ ಸರ್ಕಾರವು 2016ರಲ್ಲಿ ಪದ್ಮಶ್ರೀ, 2023ರಲ್ಲಿ ಪದ್ಮಭೂಷಣ ಪುರಸ್ಕಾರ ನೀಡಿತ್ತು.

## ಹುಟ್ಟೂರಿನಲ್ಲಿ ಅಂತ್ಯ ಸಂಸ್ಕಾರ ನಡೆಸುವಂತೆ ಸಂತೆಶಿವರ ಗ್ರಾಮಸ್ಥರ ಆಗ್ರಹ


ಸಂತೆಶಿವರ ಗ್ರಾಮದ ಒಳಿತಿಗಾಗಿ ನೀರಾವರಿ ಯೋಜನೆ ಸೇರಿದಂತೆ ಡಾ. ಎಸ್.ಎಲ್. ಭೈರಪ್ಪ ಕಲೆ ಮತ್ತು ಸಾಂಸ್ಕೃತಿಕ ಅಭಿವೃದ್ಧಿ ಕೇಂದ್ರ ಮತ್ತು ಇನ್ನು ಅನೇಕ ಜನಪರ ಅಭಿವೃದ್ಧಿಗೆ ಸರ್ಕಾರಗಳಿಂದ ಹೆಚ್ಚಿನ ಅನುದಾನ ಕೊಡಿಸುವಲ್ಲಿ ಹೆಚ್ಚು ಶ್ರಮವಹಿಸಿದ್ದರು.

ಈ ಹಿನ್ನೆಲೆಯಲ್ಲಿ ಅವರ ಶಾಶ್ವತ ಹೆಸರು ಉಳಿಯಲು ಗ್ರಾಮದಲ್ಲಿ ಅವರ ಅಂತ್ಯಸಂಸ್ಕಾರ ನಡೆಸುವ ಮೂಲಕ ಅವರ ಸ್ಮಾರಕ ನಿರ್ಮಾಣ ನಿರ್ಮಾಣ ಮಾಡುವಂತೆ ಗ್ರಾಮಸ್ಥರು ಹಾಗೂ ಅವರ ಒಡನಾಡಿಗಳು ಒತ್ತಾಯಿಸಿದರು.

**ಭೈರಪ್ಪ ಅವರ ಮೃತ ದೇಹವನ್ನು ಗುರುವಾರ (ಸೆ.25) ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ಜನಸಾಮಾನ್ಯರಿಗೆ ಅಂತಿಮ ದರ್ಶನಕ್ಕಿಡಲಾಗುತ್ತದೆ. ಅಂತ್ಯಕ್ರಿಯೆಯು ಶನಿವಾರ (ಸೆ.26) ಮೈಸೂರಿನಲ್ಲಿ ನಡೆಯಲಿದೆ. ಅವರ ವಂಶವೃಕ್ಷ, ಪರ್ವ, ನಾಯಿ ನೆರಳು, ಆವರಣ ಸೇರಿದಂತೆ 25ಕ್ಕೂ ಹೆಚ್ಚು ಕಾದಂಬರಿಗಳು ಕನ್ನಡ ಮಾತೆಗೆ ಹೊಸ ಆಯಾಮ ನೀಡಿದ್ದವು.**

# ಕಾನೂನು ಸ್ವಯಂ ಸೇವಕರ ನೇಮಕ: ಶಶಿಧರ ಶೆಟ್ಟಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ಕಾನೂನು ಸ್ವಯಂ ಸೇವಕರಾಗಿ ಕೆಲಸ ನಿರ್ವಹಿಸಲು ಆಸಕ್ತಿ ಇರುವವರು ತಮ್ಮ ಹತ್ತಿರದ ನ್ಯಾಯಾಲಯ ಆವರಣದಲ್ಲಿರುವ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ಸೇವಾ ಸಮಿತಿಗಳಲ್ಲಿ ಸಂಪರ್ಕಿಸಿ ಆ.10ರೊಳಗೆ ಅರ್ಜಿ ಸಲ್ಲಿಸುವಂತೆ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಶಶಿಧರ ಶೆಟ್ಟಿ ತಿಳಿಸಿದರು.

ಮಂಗಳವಾರ ವಿಡಿಯೋ ಕಾನ್ಫರೆನ್ಸ್ ಮೂಲಕ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾನೂನು ಸ್ವಯಂ ಸೇವಕರು ಕಾನೂನು ಸೇವೆಗಳ ಪ್ರಾಧಿಕಾರಕ್ಕೆ ಪೂರಕವಾಗಿ ಕೆಲಸ ಮಾಡುವುದರ ಜೊತೆಗೆ ನೊಂದವರಿಗೆ ಕಾನೂನಿನ ಸಹಾಯ ಬೇಕಿರುವವರಿಗೆ ಸಹಾಯಹಸ್ತ ಚಾಚುವ ಕೆಲಸವನ್ನು ನಿರ್ವಹಿಸುತ್ತಾರೆ. ಅವರ ಶ್ರಮಕ್ಕೆ ತಕ್ಕ ಕೆಲಸ ನಿರ್ವಹಣೆಗೆ ಪ್ರತಿಫಲವಾಗಿ ಗೌರವಭತ್ಯೆಯನ್ನು ನೀಡಲಾಗುವುದು ಎಂದು ಹೇಳಿದರು.

ವಿವಿಧ ಕ್ಷೇತ್ರಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಭ್ಯರ್ಥಿಗಳಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ. ಸೇವಾ ಮನೋಭಾವವುಳ್ಳ ಶಿಕ್ಷಕರು, ನಿವೃತ್ತ ಶಿಕ್ಷಕರು, ಸ್ಥಳೀಯ ಸಂಸ್ಥೆಗಳ ಮಾಜಿ ಸದಸ್ಯರು, ನಿವೃತ್ತ ಸರ್ಕಾರಿ ನೌಕರರು ಮತ್ತು ಹಿರಿಯ ನಾಗರಿಕರು, ಸಾಮಾಜಿಕ ಕ್ಷೇತ್ರಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವವರು, ಮಹಿಳೆಯರು, ಲಿಂಗತ್ವ ಅಲ್ಪಸಂಖ್ಯಾತರು, ಬುಡಕಟ್ಟು ಜನಾಂಗದವರು, ಸಾಮಾಜಿಕ ಕಾರ್ಯಕ್ಷೇತ್ರ ಅಧ್ಯಯನ ಮಾಡುತ್ತಿರುವ ವಿದ್ಯಾರ್ಥಿಗಳು, ಅಂಗನವಾಡಿ ಕಾರ್ಯಕರ್ತೆಯರು, ವೈದ್ಯರು, ಕಾನೂನು ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು, ಸಾಮಾಜಿಕ ಸೇವೆಯನ್ನು ನಿರ್ವಹಿಸುತ್ತಿರುವ ಸಂಘಗಳ ಎನ್‌ಜಿಓ ಸದಸ್ಯರು, ಮಹಿಳಾ ಸ್ವಸಹಾಯ ಸಂಘದ ಸದಸ್ಯರು, ಮೈತ್ರಿ ಸಂಗಮ ಸದಸ್ಯರು, ಉತ್ತಮ ನಡವಳಿಕೆಯುಳ್ಳ ಕಾರಾಗೃಹ ಬಂಧಿವಾಸಿಗಳು, ಮಾಜಿ ಸೈನಿಕರು ಮತ್ತು ಮಾಜಿ ಸೈನಿಕರ ವಿಧವಾ ಪತ್ನಿಯರು, ಆಶಾ ಕಾರ್ಯಕರ್ತೆಯರು ಅರ್ಜಿ ಸಲ್ಲಿಸಬಹುದಾಗಿದೆ ಎಂದು ಹೇಳಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಜಿ.ಕೆ.ದಾಕ್ಷಾಯಿಣಿ ಮಾತನಾಡಿ, ಕಾನೂನು ಸ್ವಯಂ ಸೇವಕರನ್ನು ನ್ಯಾಯ ಮಿತ್ರರು ಎಂದು ಸಹ ಕರೆಯಲಾಗುತ್ತದೆ. ಇವರಿಗೆ ಸೂಕ್ತ ತರಬೇತಿಯನ್ನು ನೀಡಲಾಗುವುದು ಮತ್ತು ಗುರುತಿನ ಚೀಟಿ ವಿತರಿಸಲಾಗುವುದು. ಅಲ್ಲದೆ ಇವರ ನೇಮಕಾತಿಯು ಒಂದು ವರ್ಷದ ಅವಧಿಯವರೆಗೂ ಇರುತ್ತದೆ ಎಂದು ತಿಳಿಸಿದರು.

# ಗಣಪತಿ ಸೇವಾ ಸಮಿತಿಯಿಂದ ಅನ್ನ ಸಂತರ್ಪಣೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ನಗರದ ಪೆಂಡಾಲ್ ಗಣಪತಿ ಸೇವಾ ಸಂಸ್ಥೆಯಿಂದ 71ನೇ ಗಣೇಶೋತ್ಸವ ಅಂಗವಾಗಿ ಮಂಗಳವಾರ ಅನ್ನಸಂತರ್ಪಣೆ ಏರ್ಪಡಿಸಲಾಗಿತ್ತು.

ಸಮಿತಿ ಅಧ್ಯಕ್ಷ ಡಾ. ಹೆಚ್. ನಾಗರಾಜು ಮಾತನಾಡಿ, ಆ. 27 ರಿಂದ ಸೆ. 20ರ ವರೆಗೆ ಗಣೇಶ ಉತ್ಸವ ಅರ್ಥಪೂರ್ಣವಾಗಿ ನೆರವೇರಿತು. ನಿತ್ಯ ಪೂಜಾ ಕೈಂಕರ್ಯ, ಮಧ್ಯಾಹ್ನ ಸಾರ್ವಜನಿಕರಿಗೆ ಪ್ರಸಾದ, ಸಂಜೆ ಸಾಂಸ್ಕೃತಿಕ ಕಾರ್ಯಕ್ರಮಗಳು ನೆರವೇರಿದೆ. ಶನಿವಾರ ಗಣಪತಿ ವಿಸರ್ಜನಾ ಮಹೋತ್ಸವ ಅರ್ಥಪೂರ್ಣವಾಗಿ ನೆರವೇರಿದೆ. 30ಕ್ಕೂ ಹೆಚ್ಚು ಕಲಾತಂಡಗಳು ಮೆರವಣಿಗೆಯ ಆಕರ್ಷಣೆಯಾಗಿದ್ದವು ಎಂದರು.

ಸಮಿತಿ ಕಾರ್ಯದರ್ಶಿ ಚನ್ನವೀರಪ್ಪ ಮಾತನಾಡಿ, 71 ವರ್ಷಗಳಿಂದ ಅರ್ಥಪೂರ್ಣವಾಗಿ ಗಣೇಶ ಉತ್ಸವ ಮಾಡಿಕೊಂಡು ಬರಲಾಗಿದೆ. ವಿವಿಧ ಸ್ಪರ್ಧೆ ಏರ್ಪಡಿಸಲಾಗುತ್ತಿದೆ. ಸಾರ್ವಜನಿಕರಿಂದಲೂ ಉತ್ತಮ ಸ್ಪಂದನೆ ಸಿಕ್ಕಿದೆಯೆಂದರು.

ಮಹಾನಗರ ಪಾಲಿಕೆ ಮೇಯರ್ ಗಿರೀಶ್ ಚನ್ನವೀರಪ್ಪ, ಉಪ ಮೇಯರ್ ಹೇಮಾಲತಾ ಕಮಲ್ ಕುಮಾರ್, ಗಣಪತಿ ಸೇವಾ ಸಮಿತಿ ಧರ್ಮದರ್ಶಿಗಳಾದ ಲಲಾಟ್ ಮೂರ್ತಿ, ಬೂದೇಶ್, ಹೆಚ್.ಟಿ. ಶೇಖರ್, ಹೆಚ್. ಎಸ್. ಅನಂತನಾರಾಯಣ, ಎನ್.ಎಸ್. ಶಂಕರರಾವ್, ಹೆಚ್.ಎಂ.ಟಿ. ಸುರೇಶ್ ಕುಮಾರ್, ಎಂ.ಕೆ. ಕಮಲ್ ಕುಮಾರ್, ಹೆಚ್.ಡಿ. ದೀಪಕ್, ಲೀಲಾಕುಮಾರ್ ಇತರರಿದ್ದರು.

# ಹಿರೀಸಾವೆ: 12 ಜಾನುವಾರುಗಳ ರಕ್ಷಣೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ಎರಡು ಪ್ರತ್ಯೇಕ ಪ್ರಕರಣಗಳಲ್ಲಿ ಅಕ್ರಮವಾಗಿ ಕಸಾಯಿಖಾನೆಗೆ ಸಾಗಿಸುತ್ತಿದ್ದ 12 ಜಾನುವಾರುಗಳನ್ನು ಪೊಲೀಸರು ರಕ್ಷಣೆ ಮಾಡಿದ್ದಾರೆ.

ಚನ್ನರಾಯಪಟ್ಟಣ ತಾಲ್ಲೂಕಿನ ಹಿರೀಸಾವೆ ಗ್ರಾಮದ ಬಳಿ ಎಮ್ಮೆಗಳನ್ನು ತುಂಬಿಕೊಂಡು ಸಾಗಾಟ ಮಾಡುತ್ತಿದ್ದ ವಾಹನವನ್ನು ಗೋ ಸೇವಾ ಟ್ರಸ್ಟ್‌ನ ಕಾರ್ಯಕರ್ತರು ಹಿಂಬಾಲಿಸಿ ಹಿಡಿದು ಪೊಲೀಸರಿಗೆ ಒಪ್ಪಿಸಿದ್ದಾರೆ.

ನಸುಕಿನ ಜಾವ 3 ಗಂಟೆ ಸಮಯದಲ್ಲಿ ಕೆಎ-13-ಡಿ-6823 ನಂಬರ್‌ನ ಗೂಡ್ಸ್ ವಾಹನದಲ್ಲಿ ಎಮ್ಮೆಗಳನ್ನು ಸಾಗಿಸುತ್ತಿದ್ದ ಬಗ್ಗೆ ಪೊಲೀಸರಿಗೆ ಮಾಹಿತಿ ನೀಡಿ, ನಂತರ ಕಾರ್ಯಕರ್ತರು ಐದಾರು ಕಿಲೋಮೀಟರ್ ವಾಹನವನ್ನು ಹಿಂಬಾಲಿಸಿ ತಡೆದಿದ್ದಾರೆ.

ಈ ವೇಳೆ ಗೂಡ್ಸ್ ವಾಹನದಲ್ಲಿ ಉಸಿರುಗಟ್ಟುವಂತೆ ತುಂಬಿದ್ದ 7 ಎಮ್ಮೆಗಳನ್ನು ರಕ್ಷಣೆ ಮಾಡಿ, ವಾಹನ ಸಮೇತ ಪೊಲೀಸರಿಗೆ ಒಪ್ಪಿಸಿದ್ದಾರೆ. ಮತ್ತೊಂದು ಪ್ರಕರಣದಲ್ಲಿ ಕಾನೂನುಬಾಹಿರವಾಗಿ ಜಾನುವಾರುಗಳನ್ನು ಕಸಾಯಿಖಾನೆಗೆ ಸಾಗಾಟ ಮಾಡುತ್ತಿದ್ದವನನ್ನು 5 ಜಾನುವಾರು ಸಮೇತ ವಾಹನವನ್ನು ಅರಕಲಗೂಡು ತಾಲ್ಲೂಕಿನ ಕೊಣನೂರು ಪೊಲೀಸರು ಬಂಧಿಸಿದ್ದಾರೆ.

ಪಿಎಸ್‌ಐ ಬ್ಯಾಲಿ ಹಾಗೂ ಸಿಬ್ಬಂದಿಗೆ ಬಾತ್ಮೀದಾರರಿಂದ ಬಂದ ಮಾಹಿತಿ ಪ್ರಕಾರ, ರಾಮನಾಥಪುರ ಸಂತೆಯಿಂದ ಬೆಟ್ಟದಪುರ ಕಸಾಯಿಖಾನೆಗೆ ಯಾವುದೇ ಜಾನುವಾರು ಗಳನ್ನು ಗೂಡ್ಸ್ ವಾಹನದಲ್ಲಿ ತೆಗೆದುಕೊಂಡು ಕಸಾಯಿಖಾನೆಗೆ ಸಾಗಾಟ ಮಾಡಲಾಗುತ್ತಿತ್ತು. ಗಂಗೂರು ಹ್ಯಾಂಡ್ ಪೋಸ್ಟ್ ಹತ್ತಿರ ಹಾದುಹೋಗಿರುವ ರಾಮನಾಥಪುರ-ಬೆಟ್ಟದಪುರ ರಸ್ತೆಯಲ್ಲಿ ಕೆಎ13-ಸಿ6090 ಸಂಖ್ಯೆಯ ಗೂಡ್ಸ್ ವಾಹನದ ಮೇಲೆ ದಾಳಿ ಮಾಡಿ, ಜಾನುವಾರುಗಳನ್ನು ರಕ್ಷಣೆ ಮಾಡಿದ್ದಾರೆ.

# ಜಿಎಸ್‌ಟಿ ಹೊರೆ ಇಳಿಕೆ: ಬಿಜೆಪಿ ವಿಜಯೋತ್ಸವ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಕೇಂದ್ರ ಸರ್ಕಾರ ಜಿಎಸ್‌ಟಿ ಹೊರೆ ಇಳಿಕೆ ಮಾಡಿರುವುದನ್ನು ಸ್ವಾಗತಿಸಿ ಚನ್ನರಾಯಪಟ್ಟಣದ ಬಿಜೆಪಿ ಘಟಕವು ವಿಜಯೋತ್ಸವ ಆಚರಿಸಿತು.

ಪ್ರಧಾನಿ ನರೇಂದ್ರ ಮೋದಿ ಅವರ ನಿರ್ಧಾರವನ್ನು ಶ್ಲಾಘಿಸಿದ ಮುಖಂಡರು, ಇದು ಜನಪರ ಆಡಳಿತಕ್ಕೆ ಸಾಕ್ಷಿ ಎಂದರು.

ಪಟ್ಟಣದ ಕೆ.ಆರ್. ವೃತ್ತದಲ್ಲಿ ನಡೆದ ವಿಜಯೋತ್ಸವ ಮೆರವಣಿಗೆಗೆ ಚಾಲನೆ ನೀಡಿ ಮಾತನಾಡಿದ ಬಿಜೆಪಿ ತಾಲ್ಲೂಕು ಮುಖಂಡ ಚಿದಾನಂದ್, ನವರಾತ್ರಿಯ ಮೊದಲ ದಿನವೇ ಗ್ರಾಹಕರಿಗೆ ಬಂಪರ್ ಕೊಡುಗೆ ನೀಡಲಾಗಿದೆ. ಹೊಸ ಜಿಎಸ್‌ಟಿ ದರಗಳು ಬಡವರು, ಕೂಲಿ ಕಾರ್ಮಿಕರು ಮತ್ತು ರೋಗಿಗಳಿಗೆ ಹೆಚ್ಚು ನೆರವಾಗಲಿದೆ ಎಂದು ತಿಳಿಸಿದರು.

ತಾಲ್ಲೂಕು ಬಿಜೆಪಿ ಮುಖಂಡ ನಂಜುಂಡ ಮೈಮ್ ಮಾತನಾಡಿ, 375 ವಸ್ತುಗಳ ಮೇಲಿನ ಜಿಎಸ್‌ಟಿ ಕಡಿತವು ಬಡವರ ಬಗ್ಗೆ ಪ್ರಧಾನಿ ಅವರಿಗಿರುವ ಕಾಳಜಿಯನ್ನು ತೋರಿಸುತ್ತದೆ. ಈ ಕ್ರಮದಿಂದ ದೇಶದ ಆರ್ಥಿಕ ಬೆಳವಣಿಗೆ ಮತ್ತಷ್ಟು ವೇಗ ಪಡೆಯಲಿದೆ ಎಂದು ಅಭಿಪ್ರಾಯಪಟ್ಟರು.

ಪಟ್ಟಣದ ಕೆ.ಆರ್.ವೃತ್ತದಿಂದ ಹಳೇಬಸ್ ನಿಲ್ದಾಣ, ಆಂಜನೇಯ ದೇವಸ್ಥಾನದಿಂದ ನಗರ ಪೊಲೀಸ್ ಠಾಣೆ ವರೆಗೆ ಜಾಥ ನಡೆಸಿ ಘೋಷಣೆಗಳನ್ನು ಕೂಗುತ್ತಾ ಪಟಾಕಿ ಸಿಡಿಸಿ, ಸಿಹಿ ಹಂಚಿ ವಿಜಯೋತ್ಸವ ಆಚರಿಸಿದರು.

ಮುಖಂಡರಾದ ಜಗದೀಶ್ ಕೆರೆಬೀದಿ, ಧರಣೇಶ್, ಮಂಜು, ರೂಪೇಶ್, ರಾಜ್‌ಕುಮಾರ್, ರಂಗೇಗೌಡ, ವಿಶ್ವನಾಥ್ ಉಪಸ್ಥಿತರಿದ್ದರು.

# ಪ್ರತ್ಯೇಕ ಅಪಘಾತದಲ್ಲಿ ಇಬ್ಬರ ಸಾವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಅರಸೀಕೆರೆ ತಾಲ್ಲೂಕಿನ ಜಾವಗಲ್ ಹಾಗೂ ಗಂಡಸಿ ಠಾಣೆ ವ್ಯಾಪ್ತಿಯಲ್ಲಿ ಸಂಭವಿಸಿದ ಪ್ರತ್ಯೇಕ ರಸ್ತೆ ಅಪಘಾತದಲ್ಲಿ ಇಬ್ಬರು ಮೃತಪಟ್ಟಿದ್ದಾರೆ.

ಬೈಕ್ ಡಿಕ್ಕಿಯಾಗಿ ಪಾದಚಾರಿ ಮೃತಪಟ್ಟಿರುವ ಘಟನೆ ತಾಲ್ಲೂಕಿನ ಜಾವಗಲ್‌ನಲ್ಲಿ ನಡೆದಿದೆ. ಹಳೇಬೀಡು ಹೋಬಳಿ ಹಿರೇಹಳ್ಳಿ ಗ್ರಾಮದ ಕರಿಯಪ್ಪ (57) ಮೃತರು. ಪಟ್ಟಣದ ಕೆಇಬಿ ಎದುರಿನ ಪಾದಚಾರಿ ಮಾರ್ಗದಲ್ಲಿ ನಡೆದುಕೊಂಡು ಹೋಗುತ್ತಿದ್ದಾಗ ಹಿಂದಿನಿಂದ ವೇಗವಾಗಿ ಬಂದ ಬೈಕ್ ಸವಾರ ಡಿಕ್ಕಿ ಮಾಡಿದ್ದಾನೆ. ಗಂಭೀರ ಗಾಯಗೊಂಡಿದ್ದ ಕರಿಯಪ್ಪ ಅವರನ್ನು ಹಿಮ್ಸ್‌ಗೆ ದಾಖಲಿಸಲಾಯಿತಾದರೂ ಚಿಕಿತ್ಸೆ ಫಲಿಸದೆ ಮೃತಪಟ್ಟಿದ್ದಾರೆ. ಜಾವಗಲ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮತ್ತೊಂದು ಪ್ರಕರಣದಲ್ಲಿ ಬೈಕ್ ಡಿಕ್ಕಿಯಾಗಿ ಹಿಂಬದಿ ಸವಾರ ಮೃತಪಟ್ಟು ಇಬ್ಬರು ಗಾಯಗೊಂಡಿರುವ ಘಟನೆ ಗಂಡಸಿ ಹೋಬಳಿ ದೊಡ್ಡಯರಗನಾಳು ಸಮೀಪ ನಡೆದಿದೆ.ಚಗಚಗೆರೆ ಗ್ರಾಮದ ಚರಣ್‌ಕುಮಾರ್ ಮೃತರು. ಗ್ರಾಮದ ಯೋಗೇಶ್ ಅವರೊಂದಿಗೆ ದೊಡ್ಡಯರಗನಾಳು ಗ್ರಾಮದಲ್ಲಿ ಆಯೋಜಿಸಿದ್ದ ಆರ್ಕೆಸ್ಟ್ರಾ ನೋಡಲೆಂದು ಬೈಕ್‌ನಲ್ಲಿ ತೆರಳಿದ್ದರು. ಸೆ. 21ರ ರಾತ್ರಿ 9.30ರ ವೇಳೆ ಮನೆಗೆ ಬರುತ್ತಿದ್ದಾಗ ರಸ್ತೆಯ ಎಡಬದಿಗೆ ನಡೆದುಕೊಂಡು ಹೋಗುತ್ತಿದ್ದ ವ್ಯಕ್ತಿಗೆ ಬೈಕ್ ಡಿಕ್ಕಿಯಾಗಿದೆ. ಅಪಘಾತದಲ್ಲಿ ಯೋಗೇಶ್, ಚರಣ್‌ಕುಮಾರ್ ಹಾಗೂ ಪಾದಚಾರಿ ಧರ್ಮಕುಮಾರ್ ಗಂಭೀರ ಗಾಯಗೊಂಡಿದ್ದರು. ಚಿಕಿತ್ಸೆ ಫಲಿಸದೆ ಚರಣ್‌ಕುಮಾರ್ ಹಿಮ್ಸ್‌ನಲ್ಲಿ ಮೃತಪಟ್ಟಿದ್ದಾರೆ. ಗಾಯಾಳುಗಳಿಗೆ ಚಿಕಿತ್ಸೆ ಮುಂದುವರಿದಿದೆ. ಗಂಡಸಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಅಕ್ರಮವಾಗಿ ಸಾಗಿಸುತ್ತಿದ್ದ ವಿವಿಧ ಜಾತಿಯ ಮರಗಳ ವಶ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಅರಣ್ಯ ಇಲಾಖೆ ಅಧಿಕಾರಿಗಳು ಕಾರ್ಯಾಚರಣೆ ನಡೆಸಿ ಅಕ್ರಮವಾಗಿ ಸಾಗಿಸುತ್ತಿದ್ದ ವಿವಿಧ ಜಾತಿಯ ಮರಗಳನ್ನು ವಶಪಡಿಸಿಕೊಂಡಿರುವ ಘಟನೆ ತಾಲ್ಲೂಕಿನ, ಬ್ಯಾಕರವಳ್ಳಿ ಗ್ರಾಮದಲ್ಲಿ ನಡೆದಿದೆ.

ಹಾಸನ ಕಡೆಯಿಂದ ಮಂಗಳೂರು ಕಡೆಗೆ ಎರಡು ಗೂಡ್ಸ್ ವಾಹನಗಳಲ್ಲಿ ಯಾವುದೇ ಪರವಾನಿಗೆ ಪಡೆಯದೆ ತರಕಾರಿ ಸಾಗಾಟ ಮಾಡುವ ರೀತಿ ಟಾರ್ಪಲ್ ಕಟ್ಟಿಕೊಂಡು ಅಕ್ರಮವಾಗಿ ಮರಗಳನ್ನು ಸಾಗಾಟ ಮಾಡಲಾಗುತ್ತಿತ್ತು. ಖಚಿತ ಮಾಹಿತಿ ಮೇರೆಗೆ ದಾಳಿ ನಡೆಸಿದ ಅರಣ್ಯ ಇಲಾಖೆ ಅಧಿಕಾರಿಗಳು ಏಳು ಟನ್‌ನಷ್ಟು ವಿವಿಧ ಜಾತಿಯ ಕಾಡುಮರಗಳು ಹಾಗೂ ಎರಡು ಗೂಡ್ಸ್ ವಾಹನ, ಇಬ್ಬರು ಚಾಲಕರನ್ನು ವಶಕ್ಕೆ ಪಡೆದಿದ್ದು, ಅರ್‌ಎಫ್‌ಓ ಹೇಮಂತ್ ಕುಮಾರ್ ನೇತೃತ್ವದಲ್ಲಿ ಕಾರ್ಯಾಚರಣೆ ನಡೆದಿದೆ. ಕಳೆದ ಒಂದು ವಾರದಲ್ಲಿ ದಾಳಿ ನಡೆಸಿರುವ ಅರಣ್ಯ ಇಲಾಖೆ ಅಧಿಕಾರಿಗಳು ಮರಗಳ ಸಮೇತ ಐದು ವಾಹನಗಳನ್ನು ವಶಕ್ಕೆ ಪಡೆದು ಪ್ರಕರಣ ದಾಖಲಿಸಿದ್ದಾರೆ. ಇತ್ತೀಚೆಗೆ ಅಕ್ರಮ ಮರಗಳ ಸಾಗಾಟ ಪ್ರಕರಣಗಳು ಹೆಚ್ಚುತ್ತಿದ್ದು ಅರಣ್ಯ ಇಲಾಖೆ ಗಸ್ತು ಹೆಚ್ಚಿಸಿದೆ.

# ಜನಮನ ಸೆಳೆಯುತ್ತಿದೆ ಅರಕಲಗೂಡು ದಸರಾ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಕಲಗೂಡು: ಪಟ್ಟಣದಲ್ಲಿ ನಡೆಯುವ ದಸರಾ ಉತ್ಸವ ವರ್ಷದಿಂದ ವರ್ಷಕ್ಕೆ ಜನರ ಗಮನ ಸೆಳೆಯುತ್ತಿದೆ ಎಂದು ಶಾಸಕ ಎ. ಮಂಜು ತಿಳಿಸಿದರು.

ಪಟ್ಟಣದ ಗ್ರಾಮ ದೇವತೆ ದೊಡ್ಡಮ್ಮ ದೇವಾಲಯದ ಆವರಣದಲ್ಲಿ ಸೋಮವಾರ ಸಂಜೆ ನಡೆದ ಕಾರ್ಯಕ್ರಮದಲ್ಲಿ 2025ರ ದಸರಾ ಮಹೋತ್ಸವಕ್ಕೆ ಚಾಲನೆ ನೀಡಿ ಮಾತನಾಡಿ, ಈ ಬಾರಿ 25ನೇ ವರ್ಷದ ದಸರಾ ಉತ್ಸವ ನಡೆಯುತ್ತಿರುವುದು ಸಂಭ್ರಮಕ್ಕೆ ಇನ್ನಷ್ಟು ಮೆರುಗು ನೀಡುತ್ತಿದೆ. 9 ದಿನಗಳ ಕಾಲ ವಿವಿಧ ಕಾರ್ಯಕ್ರಗಳು ನಡೆಯಲಿದ್ದು ವಿಜಯ ದಶಮಿಯಂದು ದೇವರ ಉತ್ಸವಗಳು ಆಕರ್ಷಕ ಮೆರವಣಿಗೆಯಲ್ಲಿ ಬನ್ನಿ



ಮಂಟಪಕ್ಕೆ ತೆರಳಲಿದ್ದು ಅಲ್ಲಿ ಬನ್ನಿಪೂಜೆ, ಧಾರ್ಮಿಕ ಸಭೆ, ಕಲಾತಂಡಗಳ ಪ್ರದರ್ಶನ ನಡೆಯಲಿದೆ. ಹೆಚ್ಚಿನ ಸಂಖ್ಯೆಯಲ್ಲಿ ಜನರು ಭಾಗವಹಿಸುವಂತೆ ಮನವಿ ಮಾಡಿದರು.

ದೊಡ್ಡಮಠದ ಮಠಾಧೀಶ ಮಲ್ಲಿಕಾರ್ಜುನ ಸ್ವಾಮೀಜಿ, ಅಧ್ಯಕ್ಷತೆ ವಹಿಸಿದ್ದ ದಸರಾ ಉತ್ಸವ ಸಮಿತಿ ಅಧ್ಯಕ್ಷ ಹಾಗೂ ಚಿಲುಮೆ ಮಠದ ಮಠಾಧೀಶ ಜಯದೇವ ಸ್ವಾಮೀಜಿ ಆಶೀರ್ವಚನ ನೀಡಿದರು. ದಸರಾ ಉತ್ಸವದ ಲಾಂಛನ ಬಿಡುಗಡೆ ಮಾಡಲಾಯಿತು.

ಪಟ್ಟಣ ಪಂಚಾಯಿತಿ ಅಧ್ಯಕ್ಷ ಎಸ್.ಎಸ್. ಪ್ರದೀಪ್ ಕುಮಾರ್, ಉಪಾಧ್ಯಕ್ಷ ಸುಬಾನ್ ಷರೀಫ್, ಸದಸ್ಯರಾದ ಹೂವಣ್ಣ, ಕೃಷ್ಣಯ್ಯ, ಮುಖ್ಯಾಧಿಕಾರಿ ನಾಗೇಂದ್ರ ಕುಮಾರ್, ಗ್ರೇಡ್-2 ತಹಸೀಲ್ದಾರ್ ಸಿ. ಸ್ವಾಮಿ, ದೊಡ್ಡಮ್ಮ ದೇವಾಲಯ ಸಮಿತಿ ಅಧ್ಯಕ್ಷ ಎ.ಎಸ್.ರಾಮಸ್ವಾಮಿ, ಕಾರ್ಯದರ್ಶಿ ಶಶಿಕುಮಾರ್, ತಾಲ್ಲೂಕು ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಪುಟ್ಟರಾಜ್, ಮುಖಂಡರ ಮುತ್ತಿಗೆ ರಾಜೇಗೌಡ, ದಸರಾ ಸಮಿತಿ ಕಾರ್ಯದರ್ಶಿ ರವಿಕುಮಾರ್, ವೀರಶೈವ ಲಿಂಗಾಯತ ಮಹಾಸಭಾದ ಜಿಲ್ಲಾ ಕಾರ್ಯದರ್ಶಿ ಎನ್. ರವಿಕುಮಾರ್ ಇತರರಿದ್ದರು.

# ಆಯುರ್ವೇದ ಪದ್ಧತಿಗೆ ಶೀಘ್ರ ವಿಶ್ವಮಾನ್ಯತೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ಭಾರತ ಮೂಲದ ವೈದ್ಯಕೀಯ ಪದ್ಧತಿಯಾದ ಆಯುರ್ವೇದವು ಶೀಘ್ರದಲ್ಲೇ ವಿಶ್ವ ಮಾನ್ಯತೆ ಪಡೆಯುತ್ತದೆ ಎಂದು ಪಶುವೈದ್ಯಕೀಯ ಮಹಾವಿದ್ಯಾಲಯ ಡೀನ್ ಡಾ. ಓ.ಆರ್. ನಟರಾಜ್ ಹೇಳಿದರು.

ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಆಯುರ್ವೇದ ಮಹಾವಿದ್ಯಾಲಯ ಮತ್ತು ಆಸ್ಪತ್ರೆಯಲ್ಲಿ ಹಮ್ಮಿಕೊಂಡಿದ್ದ 10ನೇ ರಾಷ್ಟ್ರೀಯ ಆಯುರ್ವೇದ ದಿನಾಚರಣೆಯಲ್ಲಿ ಮಾತನಾಡಿ, ಆಯುರ್ವೇದ ಕೇವಲ ಮಾನವ ಆರೋಗ್ಯಕ್ಕೆ ಮಾತ್ರವಲ್ಲ, ಪ್ರಾಣಿಗಳ ಚಿಕಿತ್ಸೆಯಲ್ಲಿಯೂ ಮಹತ್ತರ ಪಾತ್ರ ವಹಿಸಿದೆ. ಗಜ ಆಯುರ್ವೇದ, ಹಸ್ತಿ ಆಯುರ್ವೇದ ಮುಂತಾದ ಪುರಾತನ ಗ್ರಂಥಗಳು ಅದಕ್ಕೆ ನಿದರ್ಶನ. ಇಂದಿಗೂ ಪಶು ವೈದ್ಯಕೀಯ ಕ್ಷೇತ್ರದಲ್ಲಿ ಅನೇಕ ಸಂಶೋಧನೆಗಳು ನಡೆಯುತ್ತಿದ್ದು, ಯುವ ಸಂಶೋಧಕರು ವಿಜ್ಞಾನವನ್ನು ಜನಸಾಮಾನ್ಯರಿಗೆ ತಲುಪಿಸುವ ರಾಯಭಾರಿಗಳಾಗಬೇಕು ಎಂದರು.

ಮಹಾನಗರ ಪಾಲಿಕೆ ಮೇಯರ್ ಗಿರೀಶ್ ಚನ್ನವೀರಪ್ಪ ಮಾತನಾಡಿ, 33 ವರ್ಷಗಳ ಹಿಂದೆ ಪುಟ್ಟ ಕಟ್ಟಡದಲ್ಲಿ ಪ್ರಾರಂಭವಾದ ಎಸ್‌ಡಿಎಂ ಆಯುರ್ವೇದ ಕಾಲೇಜು ಇಂದು ದೇಶಾದ್ಯಂತ ಹೆಸರು ಪಡೆದಿರುವುದು ಹೆಮ್ಮೆಯ ವಿಚಾರ ಎಂದರು.

ಎಸ್‌ಡಿಎಂ ಕಾಲೇಜು ಪಾಂಶುಪಾಲರಾದ ಡಾ. ಶೈಲಜಾ ಮಾತನಾಡಿ, ಆಯುಷ್ ಸಚಿವಾಲಯದ ಮಾರ್ಗಸೂಚಿಯಂತೆ ಕಳೆದ ಒಂಬತ್ತು ವರ್ಷಗಳಿಂದ ಆಯುರ್ವೇದ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲಾಗುತ್ತಿದೆ. ಈ ಬಾರಿ ಜನರಿಗಾಗಿ ಮತ್ತು ಭೂಗ್ರಹಕ್ಕಾಗಿ ಆಯುರ್ವೇದ ಎಂಬ ಘೋಷವಾಕ್ಯದಡಿ ಸಮಾರಂಭ ಹಮ್ಮಿಕೊಳ್ಳಲಾಗಿದೆ.

ಉತ್ತಮ ಆರೋಗ್ಯಕ್ಕಾಗಿ ಪರಿಸರ ಸಂರಕ್ಷಿಸುವುದು ನಮ್ಮೆಲ್ಲರ ಜವಾಬ್ದಾರಿಯೆಂದರು.

## ವಿಶೇಷ ಕಾರ್ಯಕ್ರಮ

ವಿಶ್ವ ಆಯುರ್ವೇದ ದಿನಾಚರಣೆ ಅಂಗವಾಗಿ ಯೋಗ ತರಬೇತಿ, ಆಯುರ್ವೇದ ಆಹಾರ ತಯಾರಿಕೆ, ಉಪನ್ಯಾಸ, ಪ್ರಾತ್ಯಕ್ಷಿಕೆ, ಸ್ವರ್ಣಾಮೃತಪ್ರಾಶನ, ರಕ್ತದಾನ ಶಿಬಿರ, ಆರೋಗ್ಯ ಉಚಿತ ತಪಾಸಣೆ ಮತ್ತು ಚಿಕಿತ್ಸಾ ಶಿಬಿರ ಹಮ್ಮಿಕೊಳ್ಳಲಾಗಿತ್ತು. ವೇದಿಕೆ ಕಾರ್ಯಕ್ರಮ ಬಳಿಕ ನಮ್ಮ ನಡಿಗೆ ಆಯುರ್ವೇದ ಕಡೆಗೆ ಎಂಬ ಘೋಷಣೆಯೊಂದಿಗೆ 600ಕ್ಕೂ ಹೆಚ್ಚು ವಿದ್ಯಾರ್ಥಿ ಮತ್ತು ಸಿಬ್ಬಂದಿ ಜಾಗೃತಿ ಜಾಥಾ ನಡೆಸಿದರು.

# ಇತಿಹಾಸದಲ್ಲಿ ಈ ದಿನ

## ಸೆಪ್ಟೆಂಬರ್-25

1513: ವಾಸ್ಕೊ ನುನೇಜ್ ದೆ ಬಾಲ್ಬೋವಾ, ಪನಾಮಾ ಕಾಲುವೆ ಪ್ರದೇಶವನ್ನು ದಾಟಿ ಪ್ರಶಾಂತ ಮಹಾಸಾಗರವನ್ನು ಕಂಡ ಮೊದಲ ಯೂರೋಪಿಯನ್.

1789: ಅಮೇರಿಕಾ ಸಂವಿಧಾನದ ಬಿಲ್ ಆಫ್ ರೈಟ್ಸ್ ಅನ್ನು ಕಾಂಗ್ರೆಸ್ ಅಂಗೀಕರಿಸಿತು.

1956: ಜರ್ಮನಿಯ ಟೆಲಿವಿಷನ್ ಪ್ರಸಾರ ಸೇವೆ ಅಧಿಕೃತವಾಗಿ ಪ್ರಾರಂಭವಾಯಿತು.

1977: ದಕ್ಷಿಣ ಆಫ್ರಿಕಾದಲ್ಲಿ ಸ್ಟೀವ್ ಬಿಕೋ ಅವರ ಅಂತ್ಯಕ್ರಿಯೆಯಲ್ಲಿ ಸಾವಿರಾರು ಜನರು ಪಾಲ್ಗೊಂಡರು.

2008: ಚೀನಾದ ಶೆಂಜೌ7 ಅಂತರಿಕ್ಷ ನೌಕೆ ಯಶಸ್ವಿ ಮಾನವಯಾನ ನಡೆಸಿತು, ಅಲ್ಲಿ ಮೊದಲ ಬಾರಿಗೆ ಚೀನಾದ ಅಂತರಿಕ್ಷಯಾನಿ ಬಾಹ್ಯಾಕಾಶ ನಡಿಗೆ ನಡೆಸಿದರು.

1695: ಔರಂಗಜೇಬನ ಕಾಲದಲ್ಲಿ ಸಿದಿ ಯಾಕುತ್‌ಖಾನ್, ಸುಪ್ರೀಂ ಅಡ್ಮಿರಲ್, ಬಾಂಬೆ (ಮುಂಬೈ) ಮೇಲೆ ದಾಳಿ ನಡೆಸಿದರು.

1897: ವ್ಯಕ್ತಿ ಗುರುತಿನ ಪಿತಾಮಹ ಎಂದೆನಿಸಿದ ಸರ್ ರೋನಾಲ್ಡ್ ರಾಸ್, ಮಲೇರಿಯಾ ಪರೋಪಜೀವಿಯನ್ನು ಕಂಡುಹಿಡಿದ ದಿನ.

1974: ಡಾ. ರಾಜಕುಮಾರ್ ನಟಿಸಿದ ಟಭೂಮಿಗೀತಟ ಚಲನಚಿತ್ರ ಬಿಡುಗಡೆಯಾಯಿತು.

### ಜನನ

1725: ರಾಬರ್ಟ್ ಕ್ಲೈವ್, ಭಾರತದಲ್ಲಿ ಬ್ರಿಟಿಷರ ಪ್ರಭುತ್ವ ಸ್ಥಾಪಿಸಿದ ಬ್ರಿಟಿಷ್ ಸೈನ್ಯಾಧಿಕಾರಿ

1932: ಗೋರ್ಡನ್ ಹೋವರ್ಡ್, ಪ್ರಸಿದ್ಧ ಅಮೇರಿಕನ್ ಕಾದಂಬರಿಗಾರ

1947: ಮೋಹಮ್ಮದ್ ಹೋಸ್ನಿ ಮುಬಾರಕ್, ಈಜಿಪ್ಟ್‌ನ ಮಾಜಿ ರಾಷ್ಟ್ರಪತಿ

1951: ಮಾರ್ಕ್ ಹ್ಯಾಮಿಲ್, ಅಮೇರಿಕನ್ ನಟ

1952: ಕಮಲ ಹಾಸನ್, ಭಾರತೀಯ ನಟ, ನಿರ್ದೇಶಕ

### ಮರಣ

1983: ಅನ್ನದುರೈ, ತಮಿಳುನಾಡಿನ ಮುಖ್ಯಮಂತ್ರಿ ಹಾಗೂ ದ್ರಾವಿಡ ಚಳವಳಿಯ ಪ್ರಮುಖ ನಾಯಕ.

2010: ಗೋಪೀನಾಥ್ ಮೊಂಡೆ, ಮಹಾರಾಷ್ಟ್ರದ ರಾಜಕಾರಣಿ

# ರಾಜ್ಯಕ್ಕೆ ಗುಂಡಿ ಭಾಗ್ಯ ನೀಡಿದ ಕಾಂಗ್ರೆಸ್: ಬಿಜೆಪಿ ಕಿಡಿ

## ಶಾಸಕ ಸಿಮೆಂಟ್ ಮಂಜು ನೇತೃತ್ವದಲ್ಲಿ ಪ್ರತಿಭಟನೆ ನಡೆಸಿದ ಬಿಜೆಪಿ ಕಾರ್ಯಕರ್ತರು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಆಲೂರು : ರಾಜ್ಯದಲ್ಲಿ ಬಹುತೇಕ ರಸ್ತೆಗಳು ಗುಂಡಿಗಳಿಂದ ತುಂಬಿರುವುದನ್ನು ವಿರೋಧಿಸಿ ರಾಜ್ಯ ಸರ್ಕಾರದ ವಿರುದ್ಧ ಶಾಸಕ ಸಿಮೆಂಟ್ ಮಂಜು ಪ್ರತಿಭಟನೆ ನಡೆಸಿದರು.

ಬುಧುವಾರ ತಾಲೂಕಿನ ಚಿನ್ನಳ್ಳಿ, ಅಬ್ಬನ ಗ್ರಾಮದಲ್ಲಿ ಹಾದು ಹೋಗಿರುವ ಲೋಕೋಪಯೋಗಿ ಇಲಾಖೆ ರಸ್ತೆಯಲ್ಲಿ ಬಿದ್ದಿರುವ ಗುಂಡಿಗಳಿಗೆ ಬಾಳೆ ಗಿಡ ನೆಟ್ಟು ವಿನೂತನ ರೀತಿಯಲ್ಲಿ ಪ್ರತಿಭಟನೆ ನಡೆಸಿದರು

ನಂತರ ಮಾತನಾಡಿದ ಶಾಸಕರು,ರಾಜ್ಯ ಸರ್ಕಾರ ಬೆಂಗಳೂರನ್ನು ಗ್ರೇಟರ್ ಬೆಂಗಳೂರನ್ನಾಗಿ ಮಾಡಲು ಮುಂದಾಗಿದೆ ಆದರೆ ರಸ್ತೆಗಳಲ್ಲಿರುವಂತಹ ಗುಂಡಿಗಳನ್ನು ಮುಚ್ಚಲು ಸರ್ಕಾರದಲ್ಲಿ ಹಣದ ಕೊರತೆ ಇದೆ. ತೆರಿಗೆಯಿಂದ ಬಂದಂತಹ ಎಲ್ಲಾ ಹಣವನ್ನು ಗ್ಯಾರೆಂಟಿಗಳಿಗೆ ಬಳಕೆ ಮಾಡುವುದರ ಮೂಲಕ ರಾಜ್ಯದಲ್ಲಿ ಅಭಿವೃದ್ಧಿ ಕಾರ್ಯ ಕುಂಠಿತವಾಗಿದ್ದು, ಇದರಿಂದ ರಾಜ್ಯದ ಜನತೆಗೆ ಗುಂಡಿಗಳ ಭಾಗ್ಯವನ್ನು ನೀಡಿದೆ ಈ ಬಾರಿ ಮಲೆನಾಡು ಭಾಗದಲ್ಲಿ ವ್ಯಾಪಕ ಮಳೆಯಾಗಿದ್ದು ರಸ್ತೆಗಳು ಸಂಪೂರ್ಣ ಹಾಳಾಗಿದ್ದು ಸರ್ಕಾರ ಶೀಘ್ರವಾಗಿ ವಿಶೇಷ ಅನುದಾನ ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿದರು.ಕಾಡಾನೆ ಸೇರಿದಂತೆ ಇನ್ನಿತರ ಕಾಡು ಪ್ರಾಣಿಗಳ ಹಾವಳಿ ಹೆಚ್ಚಾಗಿದ್ದು ರಾತ್ರಿ ವೇಳೆ ಗುಂಡಿ ರಸ್ತೆಯಲ್ಲಿ ಸಂಚಾರ ನಡೆಸುವುದಕ್ಕೆ ಸಾಧ್ಯವಾಗುತ್ತಿಲ್ಲ ಈಗ ನೀಡುತ್ತಿರುವ ಅನುದಾನದಿಂದ ನಿರೀಕ್ಷಿತವಾಗಿ ಕೆಲಸ ಮಾಡುವ ಸಾಧ್ಯವಾಗುತ್ತಿಲ್ಲ ಕ್ಷೇತ್ರಕ್ಕೆ ತೆರಳಿದ ವೇಳೆ ಸಾರ್ವಜನಿಕರು ಶಾಸಕರನ್ನ ಪ್ರಶ್ನೆ ಮಾಡುವ ಸ್ಥಿತಿ ಬಂದಿದೆ.ಬಹುತೇಕ ರಸ್ತೆಗಳಲ್ಲಿ ಗುಂಡಿಗಳು ಇರುವುದರಿಂದ ವಾಹನ ಸವಾರರು ಬಿದ್ದು ಕೈ ಕಾಲು ಮುರಿದುಕೊಂಡು ಅನಾರೋಗ್ಯಕ್ಕೆ ತುತ್ತಾಗುತ್ತಿದ್ದಾರೆ. ಆದರೂ ಸಹ ಈ ಬಗ್ಗೆ ಸರ್ಕಾರ ಗಮನ ಹರಿಸುತ್ತಿಲ್ಲ. ಗ್ರೇಟರ್ ಬೆಂಗಳೂರು ಮಾಡುವ ಮೊದಲು ರಾಜ್ಯದಲ್ಲಿನ ರಸ್ತೆಗಳ ಗುಂಡಿಗಳನ್ನು ಮುಚ್ಚುವುದಕ್ಕೆ ಮುಂದಾಗಬೇಕು ಎಂದು ಆಗ್ರಹಿಸಿದರು.

ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅಮಿತ್ ಶೆಟ್ಟಿ ಮಾತನಾಡಿ,ಸರ್ಕಾರ ವ ದಲಿತ ಮೀಸಲಾತಿ ವಿರೋಧಿ, ರೈತ ವಿರೋಧಿ, ಭ್ರಷ್ಟಾಚಾರದ ಸರ್ಕಾರ ಎಂದು ಘೋಷಣೆಗಳನ್ನು ಕೂಗಿ ಆಕ್ರೋಶ ಹೊರಹಾಕಿದರು.

# ಬೆಟ್ಟಹಳ್ಳಿ ಗ್ರಾಮಕ್ಕೆ ನೂತನ ಬಸ್: ಶಾಸಕ ಸಿಮೆಂಟ್ ಮಂಜು ಚಾಲನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಆಲೂರು: ಸಿಂಧುವಳ್ಳಿ- ಬೆಟ್ಟಹಳ್ಳಿ ಗ್ರಾಮಸ್ಥರ ಬಹುದಿನ ಬೇಡಿಕೆಯಾದ ಸಾರಿಗೆ ಬಸ್ ಸೌಕರ್ಯಕ್ಕೆ ಶಾಸಕ ಸಿಮೆಂಟ್ ಮಂಜು ಚಾಲನೆ ನೀಡಿದರು.

ನೂತನವಾಗಿ ನಿರ್ಮಾಣಗೊಂಡ ಬಸ್ ನಿಲ್ದಾಣ ಮತ್ತು ಗ್ರಾಮಕ್ಕೆ ನೂತನವಾಗಿ ಆಗಮಿಸಿದ ನೂತನ ಮಾರ್ಗದ ಬಸ್‌ಗೆ ಚಾಲನೆ ನೀಡಿ ಮಾತನಾಡಿ, ಈ ಮಾರ್ಗದಲ್ಲಿ ಬಸ್ ಸೌಕರ್ಯವಿಲ್ಲದೆ ಆಸ್ಪತ್ರೆ, ಕಚೇರಿ ಇನ್ನಿತರೆ ಕೆಲಸಗಳಿಗೆ ಹೋಗಿ ಬರಲು ವಿದ್ಯಾರ್ಥಿಗಳು, ಮಹಿಳೆಯರು ಮತ್ತು ವೃದ್ಧರಿಗೆ ತೀವ್ರ ತೊಂದರೆಯಾಗಿದೆ ಎಂದು ಸುತ್ತಮುತ್ತಲಿನ ಗ್ರಾಮಸ್ಥರು ಹಲವು ದಿನಗಳಿಂದ ಬೇಡಿಕೆ ಇಟ್ಟಿದ್ದರು.

ನೂತನವಾಗಿ ಈ ಮಾರ್ಗದಲ್ಲಿ ಓಡಾಡುವ ಬಸ್ ತಿಪ್ಪಾಪುರ, ದೈತಾಪುರ, ಬೆಕ್ಕಡಿ, ದಾಟೂರು, ನಲ್ಲೂರು, ಮಾರನಾಯಕನಹಳ್ಳಿ, ಅರೆಹಳ್ಳ ಮತ್ತು ಸುತ್ತಮುತ್ತಲಿನ ಗ್ರಾಮಸ್ಥರಿಗೆ ಅನುಕೂಲವಾಗಿದೆ ಎಂದರು.

ಈ ಗ್ರಾಮಗಳಿಗೆ ಸಾರಿಗೆ ಬಸ್‌ನ ಸೌಕರ್ಯವಿಲ್ಲದೆ ಗ್ರಾಮಸ್ಥರು ಸುಮಾರು ನಾಲ್ಕಾರು ಕಿ.ಮೀ. ನಡೆದು ಬಂದು ಬೆಟ್ಟಹಳ್ಳಿ ಕೂಡಿಗೆಯಲ್ಲಿ ಬಸ್ ಸೌಕರ್ಯ ಪಡೆಯ ಬೇಕಾಗಿತ್ತು. ಈ ಪ್ರದೇಶ ಕಾಡಾನೆ ಪ್ರದೇಶ ಹಾವಳಿಗೊಳಪಟ್ಟಿರುವ ವಾಗಿರುವುದರಿಂದ ವಿದ್ಯಾರ್ಥಿಗಳು, ಮಹಿಳೆಯರು ಓಡಾಡಲು ಭಯ ಭೀತರಾಗಿದ್ದರು.

ಈಗ ಸಾರಿಗೆ ಬಸ್ ಸೌಕರ್ಯ ಒದಗಿರುವುದರಿಂದ ಭಯಮುಕ್ತ ರಾಗಿ ಓಡಾಡಬಹುದು. ಸಾರ್ವಜನಿಕರು ಮತ್ತು ಪ್ರಯಾಣಿಕರು ಬಸ್ ಚಾಲಕ, ನಿರ್ವಾಹಕರೊಡನೆ ಉತ್ತಮ ಬಾಂಧವ್ಯದಿಂದ ವರ್ತಿಸುವ ಮೂಲಕ ಸೌಕರ್ಯ ಫಲಪ್ರದವಾಗಲೆಂದು ಶಾಸಕರು ಹಾರೈಸಿದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248